# ಜಿಲ್ಲಾ ಪಂಚಾಯತ್, ಮೈಸೂರು

## ಅಧಿಸೂಚನೆ

**ವಿಷಯ:** ಭಾರತ ಸರ್ಕಾರದ ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ ಕಲಂ 4(1) (ಬಿ) ಅನುಸಾರ ಜಿಲ್ಲಾ ಪಂಚಾಯತ್‌ಗೆ ಸಂಬಂಧಿಸಿದ ಕಛೇರಿಯ ಮಾಹಿತಿಯನ್ನು ಪ್ರಕಟಿಸುವ ಬಗ್ಗೆ.

* * *

ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಅಡಿಯಲ್ಲಿ ರಚನೆ ಮಾಡಿರುವ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್‌ಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ / ಸಿಬ್ಬಂದಿಗಳ ಪ್ರಕಾರ್ಯಗಳು / ಅಧಿಕಾರಿಗಳು / ತೀರ್ಮಾನಗಳು ಈ ಕೆಳಕಂಡಂತೆ ಇರುತ್ತವೆ.

ಭಾರತ ಸರ್ಕಾರವು ಜಾರಿಗೆ ತಂದಿರುವ 2005ರ ಮಾಹಿತಿ ಹಕ್ಕು ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ಹಕ್ಕು ಅಧಿನಿಯಮ 2005ರ *(Central Act 22 of 2005)* ಸೆಕ್ಷನ್ 5(1) 5(2) ಮತ್ತು 19(1) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಜಿಲ್ಲಾ ಪಂಚಾಯತ್‌ಗೆ ಸೇರಿದ ಜಿಲ್ಲಾ ಘಟಕದ ಕಛೇರಿಗಳ ವ್ಯಾಪ್ತಿಯ ಮಾಹಿತಿಯನ್ನು ಕೋರುವ ವ್ಯಕ್ತಿಗಳಿಗೆ ಅಂತಹ ಮಾಹಿತಿಯನ್ನು ಮೇಲಿನ ಕಾಯ್ದೆಯನ್ವಯ ಒದಗಿಸಲು ಮಾಹಿತಿ ಕೋರುವ ಅರ್ಜಿಗಳು ಅಥವಾ ಮೇಲ್ಮನವಿಗಳನ್ನು ಸ್ವೀಕರಿಸಲು ಅನುಕ್ರಮವಾಗಿ **"ಸಾರ್ವಜನಿಕ ಮಾಹಿತಿ ಅಧಿಕಾರಿ"** ಮತ್ತು **"ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ"** ಹಾಗೂ **"ಮೇಲ್ಮನವಿ ಪ್ರಾಧಿಕಾರಿ"** ಗಳನ್ನಾಗಿ ಈ ಕೆಳಕಂಡಂತೆ ಸರ್ಕಾರದಿಂದ ನೇಮಿಸಲಾಗಿದೆ.

| | | |
|---|---|---|
| ಸಾರ್ವಜನಿಕ ಮಾಹಿತಿ ಅಧಿಕಾರಿ | : | **ಶ್ರೀ ಕೆ.ಶಿವರಾಮೇಗೌಡ,**<br>ಉಪಕಾರ್ಯದರ್ಶಿ (ಆಡಳಿತ),<br>ಜಿಲ್ಲಾ ಪಂಚಾಯತ್,<br>ಮೈಸೂರು. |
| ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ | : | **ಶ್ರೀ.ಕೆ.ಎಸ್.ಮನೋಜ್ ಕುಮಾರ್,**<br>ಸಹಾಯಕ ಕಾರ್ಯದರ್ಶಿ,<br>ಜಿಲ್ಲಾ ಪಂಚಾಯತ್,<br>ಮೈಸೂರು. |
| ಮೇಲ್ಮನವಿ ಪ್ರಾಧಿಕಾರ | : | **ಶ್ರೀ ಪಿ.ಶಿವಶಂಕರ್,**<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,<br>ಜಿಲ್ಲಾ ಪಂಚಾಯತ್, ಮೈಸೂರು. |

I ***ಜಿಲ್ಲಾ ಪಂಚಾಯತಿಯ ರಚನೆ:*** (1) ಪ್ರತಿಯೊಂದು ಜಿಲ್ಲಾ ಪಂಚಾಯತಿಯು

1. 160ನೇ ಪ್ರಕರಣದ ಅಡಿಯಲ್ಲಿ ನಿರ್ಧರಿಸಿರುವಂತೆ ಚುನಾಯಿತ ಸದಸ್ಯರನ್ನು
2. ಲೋಕಸಭೆಯ ಮತ್ತು ರಾಜ್ಯ ವಿಧಾನ ಸಭೆಯ ಯಾವ ಸದಸ್ಯರ ಚುನಾವಣೆ ಕ್ಷೇತ್ರಗಳು ಜಿಲ್ಲೆಯ ವ್ಯಾಪ್ತಿಯೊಳಗೆ ಇರುವುವೋ ಅಂಥ ಜಿಲ್ಲೆಯ ಒಂದು ಭಾಗವನ್ನು ಅಥವಾ ಸಮಗ್ರ ಜಿಲ್ಲೆಯನ್ನು ಪ್ರತಿನಿಧಿಸುವ ಸದಸ್ಯರನ್ನು
3. ಜಿಲ್ಲೆಯ ವ್ಯಾಪ್ತಿಯೊಳಗೆ ಮತದಾರರೆಂದು ನೊಂದಾಯಿತರಾದ ರಾಜ್ಯ ಸಭೆಯ ಸದಸ್ಯರನ್ನು ಮತ್ತು ರಾಜ್ಯ ವಿಧಾನ ಪರಿಷತ್ತಿನ ಸದಸ್ಯರನ್ನು ಮತ್ತು
4. ಜಿಲ್ಲೆಯ ತಾಲ್ಲೂಕು ಪಂಚಾಯತ್‌ಗಳ ಅಧ್ಯಕ್ಷರನ್ನು ಒಳಗೊಂಡಿರತಕ್ಕದ್ದು.

2(i)ನೇ ಉಪ ಪ್ರಕರಣ (ii), (iii) ಮತ್ತು (iv) ಖಂಡಗಳಲ್ಲಿ ಉಲ್ಲೇಖಿಸಲಾದ ಲೋಕಸಭೆಯ, ರಾಜ್ಯ ವಿಧಾನ ಸಭೆಯ, ರಾಜ್ಯ ಸಭೆಯ ಮತ್ತು ವಿಧಾನ ಪರಿಷತ್ತಿನ ಸದಸ್ಯರುಗಳು ಮತ್ತು ತಾಲ್ಲೂಕು ಪಂಚಾಯತ್‌ಗಳ ಅಧ್ಯಕ್ಷರುಗಳನ್ನು, 177ನೇ ಪ್ರಕರಣದ (1)ನೇ ಉಪ ಪ್ರಕರಣದಡಿ ಅಧ್ಯಕ್ಷರುಗಳನ್ನು ಮತ್ತು ಉಪಾಧ್ಯಕ್ಷರುಗಳನ್ನು ಚುನಾಯಿಸುವ ಅಥವಾ 179 ನೇ ಪ್ರಕರಣ (3)ನೇ ಉಪ ಪ್ರಕರಣದಡಿ ಅವಿಶ್ವಾಸ ನಿರ್ಣಯವನ್ನು ಪರಿಶೀಲಿಸುವ ಉದ್ದೇಶಕ್ಕಾಗಿ ಕರೆದ ವಿಶೇಷ ಸಭೆಗಳನ್ನು ಹೊರತುಪಡಿಸಿ ಜಿಲ್ಲಾ ಪಂಚಾಯತಿಯ ಯಾವುದೇ ಸಭೆಗಳ ವ್ಯವಹರಣೆಗಳಲ್ಲಿ ಭಾಗವಹಿಸಲು ಮತ್ತು ಮತ ನೀಡಲು ಹಕ್ಕುಳ್ಳವರಾಗಿರತಕ್ಕದ್ದು.

(3) ಈ ಪ್ರಕರಣದಲ್ಲಿ ಅಥವಾ 160, 161 ಮತ್ತು 162ನೇ ಪ್ರಕರಣಗಳಲ್ಲಿ ಏನೇ ಇದ್ದರೂ, ಆದರೆ, ಸರ್ಕಾರದ ಯಾವುದೇ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೊಳಪಟ್ಟ ಯಾವುದೇ ಜಿಲ್ಲಾ ಪಂಚಾಯತಿಯ ಒಟ್ಟು ಸಂಖ್ಯೆಯ ಮೂರನೇ-ಎರಡರಷ್ಟು ಸದಸ್ಯರು ಚುನಾಯಿತರಾಗಬೇಕಾಗಿದ್ದು, ಹಾಗೆ ಚುನಾಯಿತರಾಗಿರುವ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯು ಈ ಅಧಿನಿಯಮದ ಅಡಿಯಲ್ಲಿ ಯಥೋಚಿತವಾಗಿ ರಚಿತವಾಗಿರುವುದಾಗಿ ಭಾವಿಸತಕ್ಕದ್ದು.